## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1440

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 16.03.2026

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಜಿಲ್ಲೆಯಲ್ಲಿ ಬಿಪಿಎಲ್ (BPL) ಪಟ್ಟಿಯ ಮರುಪರಿಶೀಲನಾ ಕಾರ್ಯವನ್ನು ಕೊನೆಯದಾಗಿ ಯಾವ ವರ್ಷದಲ್ಲಿ ನಡೆಸಲಾಗಿದೆ; ಪ್ರಸ್ತುತ ಎಷ್ಟು ಅನರ್ಹ ಕಾರ್ಡ್‌ಗಳನ್ನು ಗುರುತಿಸಲಾಗಿದೆ; | 2025ರ ಸೆಪ್ಟೆಂಬರ್ ಮಾಹೆಯಲ್ಲಿ (ಬಿಪಿಎಲ್) ಪಟ್ಟಿಯ ಪರಿಶೀಲನೆ ಕಾರ್ಯ ನಡೆಸಲಾಗಿರುತ್ತದೆ. ಅದರನ್ವಯ 10784 ಬಿಪಿಎಲ್ ಕುಟುಂಬಗಳನ್ನು ಗುರುತಿಸಿ ಸದರಿ ಕುಟುಂಬಗಳು ಹೊಂದಿದ ಬಿಪಿಎಲ್ ಪಡಿತರ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿರುತ್ತದೆ. |
| ಆ | ಜಿಲ್ಲೆಯಲ್ಲಿ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿ ಎಲ್ಲಾ ಮಾನದಂಡಗಳ ಪ್ರಕಾರ ಅರ್ಹರಾಗಿದ್ದರೂ ಸಹ ಇನ್ನೂ ಕಾರ್ಡ್ ಪಡೆಯದ ಕುಟುಂಬಗಳ ಸಂಖ್ಯೆ ಎಷ್ಟು; | ಪಡಿತರ ಚೀಟಿಗಾಗಿ 35679 ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ 10784 ಅರ್ಹ ಅರ್ಜಿದಾರರಿಗೆ ಪಿ.ಹೆಚ್.ಹೆಚ್ ಪಡಿತರ ಚೀಟಿಗಳನ್ನು ವಿತರಿಸಲಾಗಿರುತ್ತದೆ. ಇನ್ನು 24895 ಆದ್ಯತಾ ಪಡಿತರ ಚೀಟಿ ಅರ್ಜಿಗಳು ಪರಿಶೀಲನೆಗೆ ಬಾಕಿ ಇದ್ದು, ಸರ್ಕಾರದ ಮಾನದಂಡಗಳನ್ವಯ ಪರಿಶೀಲನೆ ಕಾರ್ಯವು ಪ್ರಗತಿಯಲ್ಲಿದ್ದು, ಅರ್ಹ ಫಲಾನುಭವಿಗಳಿಗೆ ಆದ್ಯತಾ ಪಡಿತರ ಚೀಟಿ ನೀಡಲು ಕ್ರಮವಹಿಸಲಾಗುವುದು. |
| ಇ | ಹೊಸ ಪಡಿತರ ಚೀಟಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಕ್ಷೇತ್ರ ಪರಿಶೀಲನೆ (Field Verification) ನಡೆಸಿ ಕಾರ್ಡ್ ವಿತರಿಸಲು ಸರಾಸರಿ ಎಷ್ಟು ಸಮಯ ತೆಗೆದುಕೊಳ್ಳಲಾಗುತ್ತಿದೆ; ವಿಳಂಬವಾಗುತ್ತಿದ್ದರೆ, ಅದಕ್ಕೆ ಕಾರಣಗಳೇನು; | ಅರ್ಜಿ ಸಲ್ಲಿಕೆಯಾದ ನಂತರ ವಿಲೇವಾರಿಗೆ ಯಾವುದೇ ಕಾಲಮಿತಿ ಇರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ: 30.10.2025 ರಲ್ಲಿ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂತ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | ದಿನಾಂಕ 28.11.2025 ರ ಅಂತ್ಯಕ್ಕೆ ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ ಈಗಾಗಲೇ ಸಲ್ಲಿಸಿರುವ ಒಟ್ಟು 3,36,982 ಅರ್ಜಿಗಳ ಸ್ಥಳ ತನಿಖೆ ಕಾರ್ಯ ನಡೆಸಿ ಅರ್ಹರಿರುವ ಅರ್ಜಿದಾರರಿಗೆ ನಿಯಮಾನುಸಾರ FIFO(First in First Out) ಪದ್ಧತಿಯಲ್ಲಿ ಆದ್ಯತಾ ಪಡಿತರ ಚೀಟಿ ವಿತರಣೆ ಮಾಡಲು ಕ್ರಮವಹಿಸಲಾಗಿರುತ್ತದೆ. |
| ಈ | ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ನಿಯಮಬಾಹಿರವಾಗಿ ಬಿಪಿಎಲ್ ಕಾರ್ಡ್ ಹೊಂದಿದ್ದ ಎಷ್ಟು ಪ್ರಕರಣಗಳನ್ನು ರದ್ದುಪಡಿಸಲಾಗಿದೆ; ಅಂತಹವರಿಂದ ವಸೂಲಿ ಮಾಡಲಾದ ದಂಡದ ಮೊತ್ತ ಎಷ್ಟು; | ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ನಿಯಮಬಾಹಿರವಾಗಿ ಪಡೆದ ಒಟ್ಟು 203 ಬಿಪಿಎಲ್/ಅಂತ್ಯೋದಯ ಅನ್ನ ಪಡಿತರ ಚೀಟಿಗಳು ರದ್ದುಪಡಿಸಲಾಗಿರುತ್ತದೆ ಮತ್ತು ರೂ.9,19,310/- ಗಳನ್ನು ವಸೂಲಿ ಮಾಡಲಾಗಿದೆ |
| ಉ | ಪಡಿತರ ಚೀಟಿ ವಿತರಣೆಯಲ್ಲಿ ಪಾರದರ್ಶಕತೆ ತರಲು ಮತ್ತು ನೈಜ ಫಲಾನುಭವಿಗಳನ್ನು ಗುರುತಿಸಲು ಜಿಲ್ಲೆಯ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತ ಸಮಿತಿಗಳನ್ನು (Vigilance Committees) ರಚಿಸಲಾಗಿದೆಯೇ; ಹಾಗಿದ್ದಲ್ಲಿ , ಈ ಸಮಿತಿಗಳ ಕಾರ್ಯವೈಖರಿ ಹೇಗಿದೆ? | ಪಡಿತರ ಚೀಟಿ ವಿತರಣೆಯಲ್ಲಿ ಪಾರದರ್ಶಕತೆ ತರಲು ನೈಜ ಫಲಾನುಭವಿಗಳನ್ನು ಗುರುತಿಸಲು ಜಿಲ್ಲೆಯ ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಜಾಗೃತ ಸಮಿತಿ ರಚಿಸಲಾಗಿದೆ ಮತ್ತು ಈ ಸಮಿತಿ ಕಾರ್ಯವೈಖರಿ ತೃಪ್ತಿಕರವಾಗಿದೆ. |

ಇ- ಆನಾಸ 66 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು